National
Kannada
20.10.2025: 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮೂರು ರಕ್ಷಣಾ ಸೇವೆಗಳ ಸಮನ್ವಯದಿಂದ ಆಪರೇಷನ್ ಸಿಂದೂರ ಸಮಯದಲ್ಲಿ ಪಾಕಿಸ್ತಾನ ಶರಣು - ಪ್ರಧಾನಿ ನರೇಂದ್ರ ಮೋದಿ

೨. ವಿಕಸನಗೊಳ್ಳುತ್ತಿರುವ ಭದ್ರತಾ ಸವಾಲು ಎದುರಿಸಲು ಭಾರತೀಯ ಸೇನೆ ಸಂಪೂರ್ಣ ಸನ್ನದ್ಧ - ಭಾರತೀಯ ಸೇನೆಯ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ

೩. ದೀಪಾವಳಿ ಹಬ್ಬದ ಪ್ರಯುಕ್ತ ದೇಶದ ನಾಗರಿಕರಿಗೆ ರಾಷ್ಟ್ರಪತಿ ಸೇರಿದಂತೆ ಅನೇಕ ಗಣ್ಯರಿಂದ ಶುಭಾಶಯ

೪. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ; ಇಂದಿನ ಪಂದ್ಯದಲ್ಲಿ ಶ್ರೀಲಂಕಾ - ಬಾಂಗ್ಲಾದೇಶ ಮುಖಾಮುಖಿ

*****************

ಭಾರತೀಯ ಸೇನೆ, ವಾಯುಪಡೆ ಮತ್ತು ನೌಕಾಪಡೆಯ ನಡುವಿನ ಅಸಾಧಾರಣ ಸಮನ್ವಯವು ಅಪರೇಷನ್ ಸಿಂದೂರ ಸಮಯದಲ್ಲಿ ಪಾಕಿಸ್ತಾನವನ್ನು ಶರಣಾಗುವಂತೆ ಮಾಡಿತು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.ಗೋವಾ ಮತ್ತು ಕಾರವಾರ ಕರಾವಳಿಯಲ್ಲಿರುವ ಐಎನ್ಎಸ್ ವಿಕ್ರಾಂತ್‌ನಲ್ಲಿ ನೌಕಾಪಡೆಯ ಸಿಬ್ಬಂದಿಯೊಂದಿಗೆ ದೀಪಾವಳಿ ಆಚರಿಸುವ ಸಂದರ್ಭದಲ್ಲಿ ಈ ರೀತಿ ಪ್ರತಿಕ್ರಿಯೆ ನೀಡಿದರು.

ಐಎನ್ಎಸ್ ವಿಕ್ರಾಂತ್-ಆತ್ಮನಿರ್ಭರ ಭಾರತ ಮತ್ತು ಮೇಡ್ ಇನ್ ಇಂಡಿಯಾದ ಶ್ರೇಷ್ಠ ಸಂಕೇತವಾಗಿದೆ ಎಂದರು. ಕೇಂದ್ರ ಸರ್ಕಾರವು ಪ್ರತಿಯೊಂದು ಅಪಾಯವನ್ನು ಸುಧಾರಣೆಯಾಗಿ, ಪ್ರತಿಯೊಂದು ಸುಧಾರಣೆಯನ್ನು ಸ್ಥಿತಿಸ್ಥಾಪಕತ್ವವಾಗಿ ಮತ್ತು ಪ್ರತಿಯೊಂದು ಸ್ಥಿತಿಸ್ಥಾಪಕತ್ವವನ್ನು ಕ್ರಾಂತಿಯಾಗಿ ಪರಿವರ್ತಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

*****************

ವಿಕಸನಗೊಳ್ಳುತ್ತಿರುವ ಭದ್ರತಾ ಸವಾಲುಗಳನ್ನು ಎದುರಿಸಲು ಭಾರತೀಯ ಸೇನೆ ಸಂಪೂರ್ಣ ಸನ್ನದ್ಧವಾಗಿದೆ ಎಂದು ಭಾರತೀಯ ಸೇನೆಯ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಪುನರುಚ್ಚರಿಸಿದ್ದಾರೆ. ಕಾರ್ಯಾಚರಣೆಯ ಸನ್ನದ್ಧತೆಯನ್ನು ಪರಿಶೀಲಿಸಲು, ಸೈನಿಕರನ್ನು ಪ್ರೇರೇಪಿಸಲು ಹಾಗೂ ಆಯಾಕಟ್ಟಿನ ಸ್ಥಳಗಳಲ್ಲಿ ನಾಗರಿಕ - ಮಿಲಿಟರಿ ಸಂಪರ್ಕಗಳನ್ನು ಬಲಪಡಿಸಲು ಉತ್ತರಖಂಡ ವ್ಯಾಪ್ತಿಯ ಗಡಿಗಳಲ್ಲಿರುವ ಸೇನಾ ಠಾಣೆಗಳಿಗೆ ಜನರಲ್ ಉಪೇಂದ್ರ ದ್ವಿವೇದಿ ಭೇಟಿ ನೀಡಿದರು. ಇದೇ ವೇಳೆ ಅವರು, ಸ್ಥಳೀಯ ಸಮುದಾಯದವರು ಹಾಗೂ ನಿವೃತ್ತ ಯೋಧರೊಂದಿಗೆ ಸಂವಾದ ನಡೆಸಿದರು. ಅಲ್ಲದೇ ಯೋಧರಿಗೆ ಮತ್ತು ಅವರ ಕುಟುಂಬದವರಿಗೆ ದೀಪಾವಳಿಯ ಶುಭಾಶಯಗಳನ್ನು ಕೋರಿದರು. ಭೇಟಿಯ ಸಮಯದಲ್ಲಿ ಪಿತೋರ್‌ಗಢ ವ್ಯಾಪ್ತಿಯ ಗಡಿ ಪ್ರದೇಶಗಳಲ್ಲಿ ಹಾಗೂ ಸುತ್ತಮುತ್ತಲಿನ ಗಡಿಠಾಣೆಗಳಲ್ಲಿ ಭದ್ರತಾ ವ್ಯವಸ್ಥೆಯನ್ನು ಜನರಲ್ ಉಪೇಂದ್ರ ದ್ವಿವೇದಿ ಪರಿಶೀಲಿಸಿದರು.

*****************

ದೀಪಾವಳಿ ಹಬ್ಬದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ರಾಷ್ಟ್ರದ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ. ದೀಪಾವಳಿಯು ಭಾರತದ ಅತ್ಯಂತ ಜನಪ್ರಿಯ ಹಬ್ಬಗಳಲ್ಲಿ ಒಂದಾಗಿದೆ. ಇದನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಗುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಈ ಹಬ್ಬವು ಕತ್ತಲೆಯ ಮೇಲೆ ಬೆಳಕು, ಅಜ್ಞಾನದ ಮೇಲೆ ಜ್ಞಾನ ಮತ್ತು ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಂಕೇತಿಸುತ್ತದೆ. ಸಂತೋಷದ ಹಬ್ಬವು ಸ್ವಯಂ ಪ್ರತಿಬಿಂಬ ಮತ್ತು ಸ್ವಯಂ ಸುಧಾರಣೆಗೆ ಒಂದು ಸಂದರ್ಭವಾಗಿದೆ. ಇದು ಪರಸ್ಪರ ವಾತ್ಸಲ್ಯ ಹಾಗೂ ಸಹೋದರತ್ವದ ಸಂದೇಶವನ್ನು ನೀಡುತ್ತದೆ ಎಂದು ಅವರು ಹೇಳಿದರು. ದೀಪಾವಳಿಯನ್ನು ಸುರಕ್ಷಿತವಾಗಿ, ಜವಾಬ್ದಾರಿಯುತವಾಗಿ ಮತ್ತು ಪರಿಸರ ಸ್ನೇಹಿ ರೀತಿಯಲ್ಲಿ ಆಚರಿಸಲು ಅವರು ಎಲ್ಲರನ್ನು ಒತ್ತಾಯಿಸಿದ್ದಾರೆ. ಈ ದೀಪಾವಳಿ ಎಲ್ಲರಿಗೂ ಸಂತೋಷ, ಶಾಂತಿ ಮತ್ತು ಸಮೃದ್ಧಿಯನ್ನು ತರಲಿ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಾರ್ಥಿಸಿದ್ದಾರೆ. ದೀಪಾವಳಿಯು ಕೆಟ್ಟದ್ದರ ಮೇಲೆ ಒಳ್ಳೆಯತನದ ವಿಜಯವನ್ನು ಮತ್ತು ಅಜ್ಞಾನದ ಮೇಲೆ ಜ್ಞಾನದ ವಿಜಯವನ್ನು ಆಚರಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಲಕ್ಷ್ಮಿ ದೇವಿಯ ಆಶೀರ್ವಾದ ಎಲ್ಲರಿಗೂ ಲಭಿಸುವಂತೆ ಅವರು ಪ್ರಾರ್ಥಿಸಿದ್ದಾರೆ. ಈ ದೀಪಗಳ ಹಬ್ಬವು ಪ್ರತಿಯೊಬ್ಬ ನಾಗರಿಕರ ಜೀವನವನ್ನು ಸಾಮರಸ್ಯ, ಸಂತೋಷ ಮತ್ತು ಸಮೃದ್ಧಿಯಿಂದ ಬೆಳಗಿಸಲಿ. ದೇಶಾದ್ಯಂತ ಸಕಾರಾತ್ಮಕತೆಯ ಮನೋಭಾವ ಮೇಲುಗೈ ಸಾಧಿಸಲಿ

ಎಂದು ಪ್ರಧಾನಿ ನರೇಂದ್ರ ಮೋದಿ ಪ್ರಾರ್ಥಿಸಿದ್ದಾರೆ. ದೀಪಾವಳಿ ಹಬ್ಬವು ಭಾರತದ ಸಂಸ್ಕೃತಿ ಮತ್ತು ಸಂಪ್ರದಾಯಗಳ ಆತ್ಮ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ದೀಪಗಳನ್ನು ಬೆಳಗಿಸಿ ಆಚರಿಸುವ ಹಬ್ಬ ಮಾತ್ರವಲ್ಲ, ಕತ್ತಲೆಯ ಮೇಲೆ ಬೆಳಕಿನ ವಿಜಯ, ಅಜ್ಞಾನದ ಮೇಲೆ ಜ್ಞಾನ ಹಾಗೂ ಹತಾಶೆಯ ಮೇಲೆ ಭರವಸೆಯ ವಿಜಯದ ಸಂದೇಶವೂ ಆಗಿದೆ ಎಂದು ಅವರು ಹೇಳಿದರು.  ಸಮಾಜದಲ್ಲಿ ಏಕತೆ, ಸಹೋದರತ್ವ, ಪರಸ್ಪರ ನಂಬಿಕೆ ಮತ್ತು ಸಮಾನತೆಯನ್ನು ಬಲಪಡಿಸಲು ಈ ಶುಭ ಸಂದರ್ಭದಲ್ಲಿ ಪ್ರತಿಜ್ಞೆ ಮಾಡುವಂತೆ ಲೋಕಸಭಾಧ್ಯಕ್ಷರು ನಾಗರಿಕರನ್ನು ಮನವಿ ಮಾಡಿದರು.

*****************

ಸ್ವದೇಶಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ಮತ್ತು ೧೪೦ ಕೋಟಿ ಭಾರತೀಯರ ಕಠಿಣ ಪರಿಶ್ರಮವನ್ನು ಆಚರಿಸುವ ಮೂಲಕ ಹಬ್ಬದ ಋತುವನ್ನು ಸ್ವಾಗತಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರು, ನಾಗರಿಕರಿಗೆ ಕರೆ ನೀಡಿದ್ದಾರೆ.  ಹಬ್ಬದ ಋತುವಿನಲ್ಲಿ ತಾವು ಖರೀದಿಸಿರುವುದನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುವಂತೆಯೂ ಪ್ರಧಾನಿ ಮೋದಿ ನಾಗರಿಕರಲ್ಲಿ ಮನವಿ ಮಾಡಿದ್ದಾರೆ.  ಇದು ಇತರರೂ ಸಹ ಇದೇ ರೀತಿ ಮಾಡಲು ಪ್ರೇರಣೆ ನೀಡುತ್ತದೆ ಎಂದು ಅವರು ಹೇಳಿದರು.  ಭಾರತದಲ್ಲಿ ತಯಾರಿಸಿದ ಉತ್ಪನ್ನಗಳನ್ನು ಖರೀದಿಸಿ - 'ಗರ್ವ್ ಸೆ ಕಹೋ ಯೇ ಸ್ವದೇಶಿ ಹೈ' ಎಂದು ಘೋಷಿಸುವ ಅಗತ್ಯವನ್ನು ಒತ್ತಿ ಹೇಳಿದರು. ಸ್ಥಳೀಯ ಕೈಗಾರಿಕೆಗಳು ಮತ್ತು ಕುಶಲಕರ್ಮಿಗಳನ್ನು ಉತ್ತೇಜಿಸಲು, ಸ್ವಾವಲಂಬನೆ ಹಾಗೂ ಆರ್ಥಿಕ ಸಬಲೀಕರಣದ ಸಂದೇಶವನ್ನು ಬಲಪಡಿಸಲು ರಾಷ್ಟ್ರವ್ಯಾಪಿ ಆಂದೋಲನದ ನಡುವೆ ಪ್ರಧಾನಮಂತ್ರಿಯರಿಂದ ಈ ಮನವಿ ಬಂದಿದೆ. ಈ ಉಪಕ್ರಮವನ್ನು ಬೆಂಬಲಿಸುತ್ತಾ, **MyGovIndia** 'ದೀಪಾವಳಿಯನ್ನು ಆಚರಿಸಿ ಮತ್ತು ಸ್ವದೇಶಿ ಸಬಲೀಕರಣಗೊಳಿಸಿ' ಎಂಬ ಶೀರ್ಷಿಕೆಯ ವಿಶೇಷ ಅಭಿಯಾನವನ್ನು ಪ್ರಾರಂಭಿಸಿತು. ಈ ಹಬ್ಬದ ಋತುವಿನಲ್ಲಿ ಸ್ವದೇಶಿ ಉತ್ಪನ್ನಗಳನ್ನು ಮಾತ್ರ ಖರೀದಿಸುವ ಪ್ರತಿಜ್ಞೆ ಮಾಡಲು ನಾಗರಿಕರನ್ನು ಆಹ್ವಾನಿಸಿತು. ಭಾರತದ ಸಾಂಸ್ಕೃತಿಕ ಮತ್ತು ಆರ್ಥಿಕ ರಚನೆಗೆ ಅವರ ಕರಕುಶಲತೆ ಮತ್ತು ಹಾಗೂ ಜೀವನೋಪಾಯ, ಅತ್ಯಗತ್ಯವಾಗಿರುವ ಸ್ಥಳೀಯ ಕುಶಲಕರ್ಮಿಗಳನ್ನು ಬೆಂಬಲಿಸುವ ಮಹತ್ವವನ್ನು ಈ ಅಭಿಯಾನ ಒತ್ತಿಹೇಳುತ್ತದೆ. ಈ ಅಭಿಯಾನವು ಗ್ರಾಹಕರಲ್ಲಿ ಜಾಗೃತಿ ಮತ್ತು ಹೆಮ್ಮೆಯ ಪರಿಣಾಮವನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ವೈಯಕ್ತಿಕ ಆಯ್ಕೆಯನ್ನು ರಾಷ್ಟ್ರೀಯ ಪ್ರಗತಿಯೊಂದಿಗೆ ಜೋಡಿಸುತ್ತದೆ. ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಆಳವಾಗಿ ಬೇರೂರಿರುವ ಸ್ವದೇಶಿ ಚಳುವಳಿಯು ಇತ್ತೀಚಿನ ವರ್ಷಗಳಲ್ಲಿ ಸರ್ಕಾರದ 'ಆತ್ಮನಿರ್ಭರ ಭಾರತ' ಉಪಕ್ರಮದ ನಿರ್ಣಾಯಕ ಆಧಾರಸ್ತಂಭವಾಗಿ ಮತ್ತೆ ವೇಗವನ್ನು ಪಡೆದುಕೊಂಡಿದೆ.

ಸ್ಥಳೀಯ ಉತ್ಪನ್ನಗಳನ್ನು ಉತ್ತೇಜಿಸುವ ಮೂಲಕ, ಅಭಿಯಾನವು ಸ್ಥಳೀಯ ಆರ್ಥಿಕತೆಯನ್ನು ಹೆಚ್ಚಿಸಲು, ಉದ್ಯೋಗಗಳನ್ನು ಸೃಷ್ಟಿಸಲು ಮತ್ತು ಆಮದಿನ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಪ್ರಯತ್ನಿಸುತ್ತದೆ.

*****************

ಬಿಹಾರ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಸುತ್ತಿನ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಮುಕ್ತಾಯಗೊಳ್ಳಲಿದೆ. ಈ ಹಂತದಲ್ಲಿ ನವೆಂಬರ್ ೧೧ ರಂದು ರಾಜ್ಯದ ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಅಭ್ಯರ್ಥಿಗಳು ಇದೇ ೨೩ ರವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಮೊದಲ ಹಂತಕ್ಕೆ ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಮೊದಲ ಹಂತದ ಚುನಾವಣೆ ನವೆಂಬರ್ ೬ ರಂದು ನಡೆಯಲಿದೆ. ಈ ವೇಳೆ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಈಗಾಗಲೇ ಬಿಜೆಪಿ ಮತ್ತು ಜೆಡಿಯು, ಚುನಾವಣಾ ಪ್ರಚಾರಕ್ಕಾಗಿ ತಮ್ಮ ಸ್ಟಾರ್ ಪ್ರಚಾರಕರನ್ನು ನಿಯೋಜಿಸಿವೆ. ದೀಪಾವಳಿಯ ನಂತರ ಪ್ರಚಾರ ಇನ್ನಷ್ಟು ತೀವ್ರಗೊಳ್ಳುವ ನಿರೀಕ್ಷೆಯಿದೆ. ಈ ಮಧ್ಯೆ, ಬಿಹಾರಿನ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ತನ್ನ ಅಭ್ಯರ್ಥಿಗಳ ಮೂರನೇ ಪಟ್ಟಿಯನ್ನು ನಿನ್ನೆ ರಾತ್ರಿ ಬಿಡುಗಡೆ ಮಾಡಿದೆ. ೨ನೇ ಹಂತದಲ್ಲಿ ಮತದಾನ ನಡೆಯುವ ೬ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಕಾಂಗ್ರೆಸ್ ಅಖೈರುಗೊಳಿಸಿದೆ. ಮಾಜಿ ಸಚಿವ ಜಲಿಲ್ ಮಸ್ತಾನ್ ಅವರಿಗೆ ಅಮೌರ್ ಕ್ಷೇತ್ರದಿಂದ ಟಿಕೆಟ್ ನೀಡಲಾಗಿದೆ.

*****************

ನವೀ ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಇಂದು ನಡೆಯುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಶ್ರೀಲಂಕಾ ಮತ್ತು ಬಾಂಗ್ಲಾದೇಶ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

*****************

ಬೊಲಿವಿಯಾ ಅಧ್ಯಕ್ಷರಾಗಿ ರೋಡ್ರಿಗೊ ಪಾಜ್ ಆಯ್ಕೆಯಾಗಿದ್ದಾರೆ. ಬೊಲಿವಿಯಾ ಅಧ್ಯಕ್ಷ ಚುನಾವಣೆಯಲ್ಲಿ ಪ್ರತಿಸ್ಪರ್ಧಿ ಜಾರ್ಜ್ ಟುಟೊ ಕ್ವಿರೋಗಾ ಅವರನ್ನು ಪರಾಭವಗೊಳಿಸಿದ್ದಾರೆ. ರೋಡ್ರಿಗೊ ಶೇಕಡ ೫೪.೪ ರಷ್ಟು ಮತಗಳನ್ನು ಪಡೆದರೆ, ಜಾರ್ಜ್ ಶೇಕಡ ೪೫.೫ರಷ್ಟು ಮತಗಳನ್ನು ಪಡೆದಿದ್ದಾರೆ. ಈ ಮೂಲಕ ತೀವ್ರ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿರುವ ಬೊಲಿವಿಯಾದಲ್ಲಿ ಸುಮಾರು ೨ ದಶಕಗಳ ಎಡಪಂಥೀಯ ಆಡಳಿತ ಕೊನೆಗೊಂಡಿದೆ.